## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸುನೀಲಗೌಡ ಬಸನಗೌಡ ಪಾಟೀಲ್ ರವರು ನಿಯಮ 72ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

ವಿಷಯ :

ರಾಜ್ಯದಲ್ಲಿ ಅನೇಕ ಸರ್ಕಾರಿ ಶಾಲಾ ಕಟ್ಟಡಗಳು ಶಿಥಿಲಗೊಂಡಿದ್ದು (ಹಾಳಾಗಿದ್ದು), ಶೌಚಾಲಯಗಳ ಕೊರತೆಯನ್ನು ಕೂಡ ಎದುರಿಸುತ್ತಿವೆ, ಹಾಗೂ ಹಲವಾರು ಸರ್ಕಾರಿ ಶಾಲೆಗಳಲ್ಲಿ ಕೊಠಡಿಗಳ ಕೊರತೆಯ ಜೊತೆಗೆ ಆಟದ ಮೈದಾನದಂತಹ ಮೂಲ ಸೌಲಭ್ಯಗಳು ಇರುವುದಿಲ್ಲ. ಇದರಿಂದಾಗಿ ಮಕ್ಕಳ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದ್ದು, ಕಲಿಕಾ ಮಟ್ಟ ಕುಸಿಯುತ್ತಿದೆ. ಈ ಗಂಭೀರ ಸಮಸ್ಯೆಯ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ಕಳೆದ 3 ವರ್ಷಗಳಲ್ಲಿ, ರಾಜ್ಯವಲಯ ಮುಂದುವರೆದ ಯೋಜನೆಯಡಿ ಶಾಲಾ ಕಟ್ಟಡಗಳ ನಿರ್ಮಾಣ/ ದುರಸ್ಥಿಗೆ ಮಂಜೂರಾದ ಅನುದಾನದ ವಿವರ ಈ ಕೆಳಕಂಡಂತಿವೆ.

**ಕೊಠಡಿಗಳ ನಿರ್ಮಾಣ**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ಲಕ್ಷಗಳಲ್ಲಿ) |
|---|---|---|---|
| 2018–19 | 1947 | 2963 | 38020.14 |
| 2019–20 | 632 | 973 | 11989.84 |
| 2020–21 | 1007 | 1483 | 18000.00 |
| ಒಟ್ಟು | 3586 | 5419 | 68009.98 |

**ಕೊಠಡಿಗಳ ದುರಸ್ಥಿ**

| ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಮಂಜೂರಾದ ಅನುದಾನ (ಲಕ್ಷಗಳಲ್ಲಿ) |
|---|---|---|---|
| 2018–19 | 2697 | 4195 | 4242.44 |
| 2019–20 | 1065 | 5003 | 3681.00 |
| 2020–21 | 187 | 187 | 476.11 |
| ಒಟ್ಟು | 3949 | 9385 | 8399.55 |

ಮುಂದುವರೆದು 2019–20 ನೇ ಸಾಲಿನಲ್ಲಿ ಆರ್.ಐ.ಡಿ.ಎಫ್–25 ಯೋಜನೆಯಡಿಯಲ್ಲಿ ಅಧಿಕ ಮಳೆಯಿಂದ ಹಾನಿಯಾದ 3386 ಸರ್ಕಾರಿ ಶಾಲೆಗಳ 6469 ಕೊಠಡಿಗಳ ಮರು ನಿರ್ಮಾಣಕ್ಕಾಗಿ ರೂ.75807.30 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿದೆ.

2019–20ನೇ ಸಾಲಿನಲ್ಲಿ ಮಳೆಯಿಂದ ಹಾನಿಗೊಳಗಾದ 6196 ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 13260 ಕೊಠಡಿಗಳ ದುರಸ್ಥಿಗೆ ರೂ.19951.75 ಲಕ್ಷಗಳ ಅನುದಾನದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಕ್ರಮ ಕೈಗೊಳ್ಳಲಾಗಿದೆ.

2020–21ನೇ ಸಾಲಿನಲ್ಲಿ ಅತಿವೃಷ್ಟಿ/ಪ್ರವಾಹದಿಂದ ಹಾನಿಗೀಡಾದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ತುರ್ತು ದುರಸ್ಥಿಗೆ ರೂ.7557.99 ಲಕ್ಷಗಳ ಅನುದಾನದಲ್ಲಿ ಜಿಲ್ಲಾಧಿಕಾರಿಗಳ ಮುಖಾಂತರ ಕ್ರಮ ಕೈಗೊಳ್ಳಲಾಗಿದೆ.

2020–21ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ಮನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ, ಆಟದ ಮೈದಾನ, ಆವರಣ ಗೋಡೆ, ಅಡುಗೆ ಕೋಣೆ, ಮಳೆ ನೀರು ಕೊಯ್ಲು ಯೋಜನೆ, ಪೌಷ್ಟಿಕ ತೋಟ ನಿರ್ಮಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲು 2920.99 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

2021–22ನೇ ಸಾಲಿನಲ್ಲಿ ರಾಜ್ಯ ವಲಯ ಹಾಗೂ ನರೇಗಾ ಅನುದಾನ ಒಗ್ಗೂಡಿಸುವಿಕೆಯ ಮೂಲಕ ಶೌಚಾಲಯ ನಿರ್ಮಾಣ ಹಾಗೂ ದುರಸ್ತಿಗೆ 3500.00ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. 3500.00ಲಕ್ಷ ರೂಗಳ ಅನುದಾನ ಬಿಡುಗಡೆ ಮಾಡಲಾಗಿದೆ.

2021–22ನೇ ಸಾಲಿನಲ್ಲಿ ಅಮೃತ ಶಾಲಾ ಸೌಲಭ್ಯಯೋಜನೆ ಅಡಿಯಲ್ಲಿ ಆಯ್ದ 750 ಸರ್ಕಾರಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಪ್ರಯೋಗಾಲಯ, ಗ್ರಂಥಾಲಯ, ಶೌಚಾಲಯ ಇತ್ಯಾದಿ ಸಮಗ್ರ ಸೌಲಭ್ಯ ಒದಗಿಸಲು ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.75.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಸದರಿ ಯೋಜನೆಯಲ್ಲಿ ಶೌಚಾಲಯದ ಯೋಜನೆಯು ಒಳಗೊಂಡಿದೆ.

ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿ ಅವಶ್ಯಕತೆ ಇದ್ದ ಸರ್ಕಾರಿ ಶಾಲೆಗಳಲ್ಲಿ 670 ಶೌಚಾಲಯ ಘಟಕಗಳನ್ನು ರೂ.1340.00 ಲಕ್ಷಗಳ ಅನುದಾನ ಬಳಸಿಕೊಂಡು 2018–19ನೇ ಸಾಲಿನಲ್ಲಿ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಯಡಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಯೋಗದೊಂದಿಗೆ ನಿರ್ಮಾಣ ಮಾಡಲಾಗಿದೆ.

2021–22ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಒಟ್ಟಾರೆ ರೂ.67105.41 ಲಕ್ಷಗಳ ಅನುದಾನವನ್ನು ಶಾಲಾ ಕೊಠಡಿಗಳ ನಿರ್ಮಾಣ, ಕೊಠಡಿಗಳ ದುರಸ್ಥಿ, ಶೌಚಾಲಯ ನಿರ್ಮಾಣ ಮತ್ತು ದುರಸ್ಥಿ, ಕುಡಿಯುವ ನೀರು ವ್ಯವಸ್ಥೆ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳಿಗಾಗಿ ಬಿಡುಗಡೆ ಮಾಡಲಾಗಿದೆ.

ಮುಂದುವರೆದು ಶಾಲಾ ಕಟ್ಟಡಗಳ ದುರಸ್ಥಿಗಾಗಿ ರಾಜ್ಯ/ಜಿಲ್ಲಾ ವಿಪತ್ತು ನಿರ್ವಹಣಾ ನಿಧಿಯಡಿ ಹಾಗೂ ಇತರೆ ಲಭ್ಯವಿರುವ ಅನುದಾನ (ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಮತ್ತು ಡಿ.ಎಂ.ಎಫ್ ಯೋಜನೆಯಡಿ) ಬಿಡುಗಡೆ ಮಾಡಲು ಆಯಾ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿ ಅನುದಾನವನ್ನು ಬಿಡುಗಡೆ ಮಾಡಿಸಿಕೊಂಡು ಶಾಲಾ ಕಟ್ಟಡಗಳ ದುರಸ್ಥಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ದಿನಾಂಕ:19.11.2021ರಲ್ಲಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ರ ಮೂಲಕ ಸುತ್ತೋಲೆ ಹೊರಡಿಸಲಾಗಿದೆ.

ಪ್ರತಿ ವರ್ಷದಲ್ಲಿ ರಾಜ್ಯ ಮುಂದುವರಿದ ಕಾರ್ಯಕ್ರಮಗಳಡಿಯಲ್ಲಿ ಕುಡಿಯುವ ನೀರು ಶೌಚಾಲಯಗಳ ನಿರ್ವಹಣೆಗಾಗಿ ಶಾಲೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ. ಶಾಲೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ "ಜಲ ಜೀವನ್ ಮಿಷನ್" ಯೋಜನೆಯಲ್ಲಿ ಕ್ರಮ ಕೈಗೊಳ್ಳಲಾಗಿದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಯುವ-ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಪ್ರತಿ ವರ್ಷ ಜಿಲ್ಲಾವಾರು ಆಯ್ದ ಶಾಲೆಗಳಿಗೆ ಮೈದಾನಗಳ ಅಭಿವೃದ್ಧಿಗೆ ಅನುದಾನವನ್ನು ನೀಡಲಾಗುತ್ತಿದೆ.

2021-22ನೇ ಸಾಲಿನಿಂದ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಎನ್‌ಆರ್‌ಇಜಿ ಅಡಿಯಲ್ಲಿ ಮೈದಾನಗಳ ಅಭಿವೃದ್ಧಿ ಪಡಿಸುವುದಕ್ಕೆ ಅನುದಾನ ಒದಗಿಸುತ್ತಿದೆ.

ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಶಾಸನಬದ್ಧ ಅನುದಾನದಲ್ಲಿ ಶೇಕಡ 2 ರಷ್ಟು ಹಣವನ್ನು ಮೀಸಲಿರಿಸಿ ಕ್ರೀಡಾ ಮೈದಾನಗಳ ಅಭಿವೃದ್ಧಿಗೆ ನೀಡಲಾಗುತ್ತಿದೆ ಹಾಗೂ ಪುರಸಭೆ ಹಾಗೂ ನಗರಸಭೆ ಶಾಸನಬದ್ಧ ಅನುದಾನದಲ್ಲಿ ಶೇಕಡ 1 ರಷ್ಟು ಹಣವನ್ನು ಮೀಸಲಿರಿಸಿ ಕ್ರೀಡಾ ಚಟುವಟಿಕೆಗಳಿಗೆ ನೀಡಲಾಗುತ್ತಿದೆ.

ಒಟ್ಟಾರೆ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಆಟದ ಮೈದಾನದ ಅಭಿವೃದ್ಧಿಗಾಗಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿ, ಕ್ರೀಡಾ ಚಟುವಟಿಕೆಗಳ ಅಭ್ಯಾಸಕ್ಕೆ ಮತ್ತು ಪ್ರೋತ್ಸಾಹಕ್ಕೆ ಕ್ರಮ ವಹಿಸಿದೆ.

ಅನುದಾನದ ಲಭ್ಯತೆಯ ಆಧರಿಸಿ ಹೊಸ ಕೊಠಡಿ ಹಾಗೂ ದುರಸ್ಥಿ ಮತ್ತು ಶೌಚಾಲಯ, ಆಟದ ಮೈದಾನ ಅವಶ್ಯಕತೆಯಿರುವ ಕಡೆ ಆದ್ಯತೆಯ ಮೇರೆಗೆ ಹಂತ ಹಂತವಾಗಿ ಕಾಮಗಾರಿ ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ..

**ಸಂಖ್ಯೆ : ಇಪಿ 57 ಯೋಸಕ 2022**

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು